ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
ಆರನೇ ಅಧಿವೇಶನ
(ಮುಂದುವರೆದ ಉಪವೇಶನ)

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 1ನೇ ಏಪ್ರಿಲ್, 2015
(ಸಮಯ: ಬೆಳಿಗ್ಗೆ 11.00 ಗಂಟೆಗೆ)

ಗಮನ ಸೆಳೆಯುವ ಸೂಚನೆಗಳು

1. ಶ್ರೀ ಬಿ.ಎನ್. ವಿಜಯಕುಮಾರ್ ಅವರು ಬೆಂಗಳೂರಿನ ಕನಕಪುರ ರಸ್ತೆಯ ಸಾರಕ್ಕಿ ಗೇಟ್ ಜಂಕ್ಷನ್ ಬಳಿ ರಸ್ತೆ ಮತ್ತು ರಸ್ತೆ ಬದಿಯಲ್ಲಿ ಪ್ರತಿನಿತ್ಯ ತರಕಾರಿ ಮಾರುಕಟ್ಟೆ ನಡೆಯುತ್ತಿದ್ದು ಜನದಟ್ಟಣೆ ಹೆಚ್ಚಾಗಿರುವುದರಿಂದ ವಾಹನ ಸವಾರರಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

2. ಶ್ರೀ ಎ.ಎಸ್. ಪಾಟೀಲ್(ನಡಹಳ್ಳಿ) ಅವರು ಸಿಂಧಗಿ ತಾಲ್ಲೂಕಿನ ಕಲಗೇರಿ ಗ್ರಾಮದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಸ್ತ್ರೀರೋಗ ತಜ್ಞರಿಲ್ಲದೆ ಬಡ ಮಹಿಳೆಯರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

3. ಶ್ರೀ ಕೆ. ಗೋಪಾಲಯ್ಯ ಅವರು ಬೆಂಗಳೂರಿನ ಇನ್‌ಸ್ಟಿಟ್ಯೂಟ್ ಆಫ್ ನೆಫ್ರೋ-ಯುರಾಲಜಿಯಲ್ಲಿ ಡಯಾಲಿಸಿಸ್ ಯಂತ್ರಗಳನ್ನು ಉಪಯೋಗಿಸದಿರುವುದರಿಂದ ರೋಗಿಗಳಿಗೆ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

4. ಶ್ರೀಯುತರುಗಳಾದ ಹೆಚ್.ಡಿ.ರೇವಣ್ಣ ಮತ್ತು ಹೆಚ್.ಕೆ. ಕುಮಾರಸ್ವಾಮಿ ಅವರುಗಳು ಹಾಸನ ನಗರದಲ್ಲಿರುವ ಪಶುವೈದ್ಯಕೀಯ ಕಾಲೇಜು ಕಟ್ಟಡದ ಮೂರನೇ ಹಂತದ ಕಾಮಗಾರಿಯ ವಿಳಂಬ ನೀತಿಯಿಂದಾಗಿ ಮೂಲಭೂತ ಸೌಕರ್ಯಗಳ ಕೊರತೆ ಎದುರಿಸುತ್ತಿರುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

5. ಶ್ರೀ ಕೆ.ಆರ್. ರಮೇಶ್ ಕುಮಾರ್ ಅವರು ರಾಜ್ಯ ಸರ್ಕಾರಿ ನೌಕರರಿಗೆ ಮತ್ತು ನಿವೃತ್ತ ವೇತನದಾರರಿಗೆ ಕಾಲಕಾಲಕ್ಕೆ ಪರಿಷ್ಕೃತವಾಗಿರುವ ವೇತನ ಶ್ರೇಣಿ ಮತ್ತು ತುಟ್ಟಿ ಭತ್ಯೆಗಳನ್ನು ಜಾರಿಗೆ ತರುವಾಗ ನಿವೃತ್ತ ಪೌರನೌಕರರು ಮತ್ತು ಕುಟುಂಬ ಪಿಂಚಣಿದಾರರಿಗೂ ಒಂದೇ ಆದೇಶದಲ್ಲಿ ಬಿಡುಗಡೆ ಮಾಡುವಂತೆ ಹಾಗೂ ವಿಳಂಬವಾದಲ್ಲಿ ಬಡ್ಡಿಸಹಿತ ತುಟ್ಟಿ ಭತ್ಯೆಯನ್ನು ಪಾವತಿಸಬೇಕೆಂದು ಉಚ್ಚ ಹಾಗೂ ಸರ್ವೋಚ್ಚ ನ್ಯಾಯಾಲಯವು ಸೂಚಿಸಿದ್ದರೂ ಆರ್ಥಿಕ ಇಲಾಖೆಯ ಅಧಿಕಾರಿಗಳ ವಿಳಂಬ ಧೋರಣೆ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಪು.ತಿ.ನೋ.

6. ಶ್ರೀ ಗುರುಪಾಟೀಲ ಶಿರವಾಳ ಅವರು ಗದಗ ಜಿಲ್ಲೆ ರೋಣ ಮತ ಕ್ಷೇತ್ರದ ವ್ಯಾಪ್ತಿಯ ಪ್ರೌಢ ಶಾಲೆಗಳನ್ನು ಆರ್.ಎಂ.ಎಸ್.ಎ. ಯೋಜನೆಯಡಿ ನಿರ್ಮಾಣವಾಗುತ್ತಿರುವ ಕಟ್ಟಡ ಕಾಮಗಾರಿಯು ಸ್ಥಗಿತಗೊಂಡಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

7. ಶ್ರೀ ಡಿ.ಜಿ. ಶಾಂತನಗೌಡ ಅವರು 1993ರಲ್ಲಿ ಸರ್ಕಾರಿ ಪಾಲಿಟೆಕ್ನಿಕ್-ಭದ್ರಾವತಿ ಇಲ್ಲಿ ಪೇಪರ್ ಟೆಕ್ನಾಲಜಿ ಡಿಪ್ಲೊಮೊ ಪಡೆದವರಿಗೆ ಸರ್ಕಾರಿ ಉದ್ಯೋಗ ಲಭಿಸದಿರುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

8. ಶ್ರೀ ಜೆ.ಆರ್. ಲೋಬೋ ಅವರು ಪೋಲೀಸ್ ವಸತಿ ಗೃಹ ಕಟ್ಟಡದ ಆವರಣದೊಳಗೆ ವಾಸಿಸುತ್ತಿರುವ ಪರಿಶಿಷ್ಟ ಜಾತಿಗೆ ಸೇರಿದ ಬಡ ಕುಟುಂಬದವರಿಗೆ ಸದರಿ ಜಾಗವನ್ನು ಪೋಲೀಸ್ ಇಲಾಖೆಯಿಂದ ವಿರಹಿತಗೊಳಿಸಿ ಸದರಿ ಕುಟುಂಬಗಳು ವಾಸಿಸಲು ಅವಕಾಶ ನೀಡುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯವುದು.

9. ಶ್ರೀ ಸಿ.ಎನ್. ಬಾಲಕೃಷ್ಣ ಅವರು ಚನ್ನರಾಯಪಟ್ಟಣ ನಗರಕ್ಕೆ ಮಂಜೂರಾಗಿರುವ ಕ್ರೀಡಾಂಗಣದ ನಿರ್ಮಾಣ ಕಾಮಗಾರಿ ಕೈಗೆತ್ತಿಕೊಳ್ಳುವ ಬಗ್ಗೆ ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರ ಗಮನ ಸೆಳೆಯವುದು.

10. ಶ್ರೀ ಹೆಚ್.ಆರ್. ಅಲಗೂರು (ರಾಜು) ಅವರು ರಾಜ್ಯದಲ್ಲಿನ ಕುಡು ಒಕ್ಕಲಿಗ ಜನಾಂಗವನ್ನು 3ಎ ವರ್ಗಕ್ಕೆ ಸೇರ್ಪಡೆಗೊಳಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯವುದು.

ಪಿ.ಓಂಪ್ರಕಾಶ
ಕಾರ್ಯದರ್ಶಿ

VDC

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(http://kla.kar.nic.in/assembly/lob/lob.htm)